ಉಪಕಂಡಿಕೆ 8(ಅ) ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದು, ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ ರದ್ದತಿ ನಿಯಮದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದು ಅರ್ಜಿಯೊಂದಿಗೆ ಲಗತ್ತಿಸಬೇಕು.

9) ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:

ಜಾತಿ ಮೀಸಲಾತಿ ಕೋರಬಯಸುವ

- ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ
- ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಹಾಗೂ

- 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿತ ತಹಶೀಲ್ದಾರ್‌ರವರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ, ಚಾಲ್ತಿಯಲ್ಲಿರುವ ನಮೂನೆಯಲ್ಲಿ, ಪ್ರಮಾಣ ಪತ್ರವನ್ನು ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು.
- ಜನನ ಮತ್ತು ಮರಣಗಳ ನಿಬಂಧಕರಿಂದ ನೀಡಲ್ಪಟ್ಟ ಜನನ ಪ್ರಮಾಣ ಪತ್ರ.

10) ಗ್ರಾಮೀಣ ಅಭ್ಯರ್ಥಿ

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 4ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ್ದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದು ಅದರ ಒಂದೊಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧ ಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ಒಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅರ್ಜಿಯೊಡನೆ ಲಗತ್ತಿಸಿದೆ.

11) ಕನ್ನಡ ಮಾಧ್ಯಮ ಅಭ್ಯರ್ಥಿ:

ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 4ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗು ಮೊಹರು ಪಡೆದ ಪ್ರಮಾಣ ಪತ್ರದ ಒಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅರ್ಜಿಯೊಡನೆ ಲಗತ್ತಿಸಿದೆ.

12) ಅಂಗವಿಕಲ ಅಭ್ಯರ್ಥಿ

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9(1–ಎ)ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್–ಡಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನೆನಿ 2005 ದಿನಾಂಕ: 19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಅದರ ಒಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅರ್ಜಿಯೊಡನೆ ಲಗತ್ತಿಸಿದೆ.

13) ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರು ನೀಡಿದ ಪ್ರಮಾಣ ಪತ್ರದ ಒಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅರ್ಜಿಯೊಡನೆ ಲಗತ್ತಿಸಿದೆ.

14) ಅರ್ಹತಾ ಷರತ್ತುಗಳು:

ಅ) ಭಾರತೀಯ ನಾಗರಿಕನಾಗಿರತಕ್ಕದ್ದು

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಕಾಯ್ದಿರಿಸಿಕೊಂಡಿದೆ ಮತ್ತು ಕರ್ನಾಟಕ ಆಡಳಿತ ನ್ಯಾಯಮಂಡಳಿಯ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

15) ಪ್ರಮುಖವಾದ ಸೂಚನೆಗಳು:

ಅಭ್ಯರ್ಥಿಗಳು ಕೆಳಕಂಡ ಪ್ರಮಾಣ ಪತ್ರಗಳ ಒಂದೊಂದು ಛಾಯಾ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಸಲ್ಲಿಸಲಾದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿಯೊಂದಿಗೆ ದೃಢೀಕರಿಸಿದ ಪ್ರಮಾಣ ಪತ್ರಗಳನ್ನು ಲಗತ್ತಿಸಿದ ಬಗ್ಗೆ ಅರ್ಜಿಯೊಂದಿಗೆ ಸ್ವೀಕೃತಿ ಪತ್ರದಲ್ಲಿ (check list) (ದ್ವಿಪ್ರತಿಯಲ್ಲಿ) ನೀಡಲಾಗಿರುವ ಕ್ರಮ ಸಂಖ್ಯೆಗಳ ಪಕ್ಕದಲ್ಲಿರುವ ಜಾಗದಲ್ಲಿ **"ಲಗತ್ತಿಸಿದೆ"** ಎಂಬುದಾಗಿಯೂ ಹಾಗೂ ಕೇಳಿರುವ ಯಾವುದೇ ಪ್ರಮಾಣ ಪತ್ರವನ್ನು ಲಗತ್ತಿಸದೇ ಇದ್ದಲ್ಲಿ **"ಲಗತ್ತಿಸಿಲ್ಲ"** ಎಂಬುದಾಗಿ ಸ್ಪಷ್ಟವಾಗಿ ಬರೆಯತಕ್ಕದ್ದು.

1) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು
2) ಜನ್ಮ ದಿನಾಂಕವನ್ನು ನಮೂದಿಸಿರುವ ನಾಲ್ಕನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿಗಳ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ಡಿ, ಇ, ಎಫ್ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7) ಅಂಗವಿಕಲ ಮೀಸಲಾತಿ ಅಭ್ಯರ್ಥಿಯ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8) ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿಯ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
9) ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
10) ಜನಗಣತಿ ಕಾರ್ಯದಲ್ಲಿ ಕೆಲಸ ಮಾಡಿರುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
11) ಜೀತಮುಕ್ತಿಯ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

(ಮೇಲಿನ ಕ್ರಮ ಸಂಖ್ಯೆ 4, 5, 6, 7 ಮತ್ತು 8ರ ಪ್ರಮಾಣ ಪತ್ರಗಳ ನಮೂನೆಗಳನ್ನು ಅರ್ಜಿಯೊಡನೆ ಲಗತ್ತಿಸಿದೆ).

16) ಕರ್ನಾಟಕ ಆಡಳಿತ ನ್ಯಾಯಮಂಡಳಿಯೊಡನೆ ಪತ್ರ ವ್ಯವಹಾರ

ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಅಭ್ಯರ್ಥಿಯ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ರೀತಿಯ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಮಂಡಳಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಮಂಡಳಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಮಂಡಳಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಅಭ್ಯರ್ಥಿಗಳು ಮಂಡಳಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯು ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.:–

ಅ) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)
ಆ) ಹುದ್ದೆಯ ಹೆಸರು
ಇ) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

17) ಇತರೆ ಸೂಚನೆಗಳು:

1) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಅದನ್ನು ಮಡಚುವುದಾಗಲಿ, ಹರಿಯುವುದಾಗಲಿ ಮಾಡದೆ ಹಾಳಾಗದಂತೆ ಎಚ್ಚರ ವಹಿಸತಕ್ಕದ್ದು.
2) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಛಾಯಾ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

3) ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ದೃಢೀಕರಿಸಿ ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಲ್ಲಿಸತಕ್ಕದ್ದು. ಕೊನೆಯ ದಿನಾಂಕದ ನಂತರ ಸ್ವೀಕರಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
5) ಅಭ್ಯರ್ಥಿಗಳು ನಿಗದಿತ ಕೊನೆಯ ದಿನಾಂಕದವರೆವಿಗೂ ನಿರೀಕ್ಷಿಸದೆ ಮುಂಚಿತವಾಗಿ ಅರ್ಜಿ ಸಲ್ಲಿಸುವಂತೆ ಸೂಚಿಸಿದೆ.
6) ಲಕೋಟೆಯ ಮೇಲೆ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದು.

18) ದುರ್ನಡತೆ :

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

19) ಆಯ್ಕೆ ವಿಧಾನ:

1. ಕರ್ನಾಟಕ ಆಡಳಿತ ನ್ಯಾಯಮಂಡಳಿ (ನೇಮಕಾತಿ) ನಿಯಮಗಳು, 1993 ಕಾಲ ಕಾಲಕ್ಕೆ ತಿದ್ದುಪಡಿಯಾದಂತೆ ಮತ್ತು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ (3) ರ ಪ್ರಕಾರ ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಸಂದರ್ಶನವು ಗರಿಷ್ಠ 50 ಅಂಕಗಳನ್ನು ಒಳಗೊಂಡಿರುತ್ತದೆ.
2. ಸಂಬಂಧಿಸಿದ ಉದ್ಯೋಗ ವಿನಿಮಯ ಮತು ತರಬೇತಿ ಕೇಂದ್ರಗಳಿಂದಲೂ ಸಹ ಅಭ್ಯರ್ಥಿಗಳ ಪಟ್ಟಿಯನ್ನು ತರಿಸಿಕೊಳ್ಳಲಾಗುವುದು.
3. ಅಭ್ಯರ್ಥಿಯು ಅರ್ಜಿಯಲ್ಲಿ ತಪ್ಪು ಅಥವಾ ಸುಳ್ಳು ಹೇಳಿಕೆಗಳನ್ನು ನೀಡಿದಲ್ಲಿ ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿದಲ್ಲಿ ಅಥವಾ ನೇಮಕಾತಿ ಉದ್ದೇಶಗಳಿಗಾಗಿ ಅನುಚಿತ ಮಾರ್ಗವನ್ನು ಅನುಸರಿಸಿದಲ್ಲಿ ಆಯ್ಕೆಗೆ ಅನರ್ಹರಾಗುವರು.
4. ಭರ್ತಿ ಮಾಡಿದ ಅರ್ಜಿಗಳನ್ನು ಕಾರ್ಯದರ್ಶಿ, ದಲಾಯತ್ ನೇಮಕಾತಿ ಸಮಿತಿ, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಬೆಂಗಳೂರು–38 ಇವರಿಗೆ ಸಲ್ಲಿಸುವಾಗ, **"ವಿಲೇಖನಾಧಿಕಾರಿ, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಇಂದಿರಾನಗರ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಬೆಂಗಳೂರು–38."** ಇವರಿಗೆ ಪಾವತಿಯಾಗುವಂತೆ ಪಡೆದ ರೂ.50–00 ಅಂಚೆ ಆದೇಶ/ಡಿಡಿ ಹಾಗೂ ಮೀಸಲಾತಿ ಪ್ರಮಾಣ ಪತ್ರ, ಜನನ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿ ಹಾಗೂ ಭಾವಚಿತ್ರದೊಂದಿಗೆ ದಿನಾಂಕ: **12–04–2010 ರ ಸಂಜೆ 5–00 ಗಂಟೆ** ಒಳಗಾಗಿ ಸಲ್ಲಿಸತಕ್ಕದ್ದು.

20) ಇನ್ನಿತರ ಷರತ್ತುಗಳು:

ಅ) ಭಾರತೀಯ ನಾಗರಿಕನಾಗಿರತಕ್ಕದ್ದು.
ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಜೀವಂತ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದ ಪೂರ್ನಾನುಮತಿ ಇಲ್ಲದೆ ನೇಮಕಾತಿಗೆ ಅರ್ಹರಾಗುವುದಿಲ್ಲ.
ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಅರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಸಂಕ್ಷೇಪ :			
ಪ.ಜಾ	: ಪರಿಶಿಷ್ಟ ಜಾತಿ	ಕ.ಮಾ	: ಕನ್ನಡ ಮಾಧ್ಯಮ
ಪ.ಪಂ.	: ಪರಿಶಿಷ್ಟ ಪಂಗಡ	ಮ.ಅ.	: ಮಹಿಳಾ ಅಭ್ಯರ್ಥಿ
ಪ್ರ	: ಪ್ರವರ್ಗ	ಅಂ.ವಿ	: ಅಂಗ ವಿಕಲ
ಸಾ.ಅ	: ಸಾಮಾನ್ಯ ಅಭ್ಯರ್ಥಿ	ಯೋ.ಅ	: ಯೋಜನಾ ನಿರಾಶ್ರಿತ ಅಭ್ಯರ್ಥಿ
ಗ್ರಾ.ಅ	: ಗ್ರಾಮೀಣ ಅಭ್ಯರ್ಥಿ.	ಮಾ.ಸೈ	: ಮಾಜಿ ಸೈನಿಕರು.

ಅಧ್ಯಕ್ಷರು ಕರ್ನಾಟಕ ಆಡಳಿತ ನ್ಯಾಯಮಂಡಳಿ ಮತ್ತು
ನೇಮಕಾತಿ ಪ್ರಾಧಿಕಾರದ ಆದೇಶದ ಮೇರೆಗೆ,

ಎನ್. ಎ. ಲೋಕೇಶಪ್ಪ
ವಿಲೇಖನಾಧಿಕಾರಿ
ಕರ್ನಾಟಕ ಆಡಳಿತ ನ್ಯಾಯಮಂಡಳಿ.

ಅನುಬಂಧ–1

(ಪ.ಜಾ. /ಪ.ಪಂ. ಕ್ಕೆ ಸೇರಿದ ಆಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ

ನಿಯಮ 3ಎ (2)(3) ನ್ನು ನೋಡಿ)

ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ.

ಪ್ರಮಾಣ ಪತ್ರ

------------- ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ------------ ಜಿಲ್ಲೆಯ / ವಿಭಾಗದ ------------- ------ ಗ್ರಾಮ/ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ------------ಎಂಬುವವರ ಮಗ/ಮಗಳಾದ ಶ್ರೀ/ ಶ್ರೀಮತಿ -------------- ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಅದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಅದೇಶ, 1950
- ಸಂವಿಧಾನ (ಅನುಸೂಚಿತ ಜಾತಿ)(ಕೇಂದ್ರಾಡಳಿತ ಪ್ರದೇಶಗಳು) ಅದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು)(ಕೇಂದ್ರಾಡಳಿತ ಪ್ರದೇಶಗಳು) ಅದೇಶ, 1951
  (ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ರಾಜ್ಯ ಅಧಿನಿಯಮ 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಅದೇಶ, 1959.
- ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿಬುಡಕಟ್ಟುಗಳ ಆದೇಶ, 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ.

5. ಶ್ರೀ / ಶ್ರೀಮತಿ/ಕುಮಾರಿ * ------------------ ಮತ್ತು / ಅಥವಾ ಅವನ */ಅವಳ * ಕುಟುಂಬವು -------- ರಾಜ್ಯ/ ಕೇಂದ್ರಾಡಳಿತ ಪ್ರದೇಶದ ------------ ಜಿಲ್ಲಾ / ವಿಭಾಗದ * ---------- ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು).
6.

ಸಹಿ:---------

ತಹಸೀಲ್ದಾರರು-----------

ಸ್ಥಳ :

ದಿನಾಂಕ: ಪದನಾಮ

ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ/ ಹೊಡೆದು ಹಾಕಿ.

ಸೂಚನೆ: ಇಲ್ಲಿ ಉಪಯೋಗಿಸಿದ **"ಸಾಮಾನ್ಯ ನಿವಾಸಿಗಳು"** ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಮಯ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಬಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/78 ಎಸ್ ಸಿ ಟಿ –1 ಗೃಹಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ

ಸಂಖ್ಯೆ: 13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗಿರುವುದಿಲ್ಲ.

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ

ನಿಯಮ 3ಎ (2)(3) ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

-- ಗ್ರಾಮ / ಪಟ್ಟಣ / ನಗರದ ನಿವಾಸಿಯಾದ ಶ್ರೀ / ಶ್ರೀಮತಿ -- ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ -- ಇವರು ಹಿಂದುಳಿದ ವರ್ಗಗಳ (ಪ್ರವರ್ಗ) -----------------------------------ಜಾತಿಯ -------------------------- ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ತಹಸೀಲ್ದಾರರು

ಸ್ಥಳ :

ದಿನಾಂಕ

---------- ತಾಲ್ಲೂಕು

ಕಛೇರಿಯ ಮೊಹರು.

(ಪ್ರವರ್ಗ–2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ–ಎಫ್

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ

ನಿಯಮ 3ಎ (2)(3) ನ್ನು ನೋಡಿ)

ಪ್ರವರ್ಗ–1ರ ಹೊರತಾಗಿ, ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

-------------ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ---------------------- ಇವರ ಮಗ / ಮಗಳು / ಪತಿ / ಪತ್ನಿಯಾದ, ಶ್ರೀ / ಶ್ರೀಮತಿ / ಕುಮಾರಿ-----------------------ಇವರು ಮತ್ತು ಆತನ / ಅವಳ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ / ಎಸ್ ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ:30/03/2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು :

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು:

ಅಥವಾ

ಸಾರ್ವಜಿಕ ವಲಯ ಉದ್ಯಮದಲ್ಲಿ ತತ್ಸಮಾನದ ಹುದ್ದೆಯನ್ನು ಹೊಂದಿರುವುದಿಲ್ಲ.

ಅಥವಾ

ಖಾಸಗಿ ನಿಯೋಜಕರ ಕೈ ಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000/– – 12000/– ಪ್ರಾರಂಭಿಕ ಹಂತ) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು:

ಅಥವಾ

ಆತನ/ಆಕೆಯ ತಂದೆ ತಾಯಿ / ಪೋಷಕರು/ಪತ್ನಿ/ಪತಿಯ ಆದಾಯವೂ ಎರಡು ಲಕ್ಷ ಮೀರಿರುವುದಿಲ್ಲವೆಂದು:

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯೂನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಷನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30–03–2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ-----------------------------ಇವರು

-------------------------ಜಾತಿಗೆ----------------------------ಸೇರಿದ ಉಪಜಾತಿಯವರಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30–03–2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ----------------------------(2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ: ತಹಸೀಲ್ದಾರರು

ದಿನಾಂಕ: -----.. ತಾಲ್ಲೂಕು,

ಕಛೇರಿಯ ಮೊಹರು.

ನಮೂನೆ–1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕೆ ಸೇರಿಲ್ಲವೆಂದು ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ

ಇವರಿಗೆ:

ತಹಶೀಲ್ದಾರರು,

____________ತಾಲ್ಲೂಕು

____________ ಜಿಲ್ಲೆ.

ಮಾನ್ಯರೆ,

ಶ್ರೀ/ ಶ್ರೀಮತಿ____ ಎಂಬುವವರ ಮಗ/ಮಗಳು/ಪತಿ/ಪತ್ನಿ ________________________ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಆಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಆಭ್ಯರ್ಥಿಯು ಹುಟ್ಟಿದ ದಿನಾಂಕ, ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ:
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ:
7. ಅಭ್ಯರ್ಥಿಯು ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರ:
   ಪ್ರಾಥಮಿಕ:
   ಮಾಧ್ಯಮಿಕ:
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ಬೆಂಗಳೂರು: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ: 1)

(ಪೂರ್ಣ ವಿಳಾಸದೊಂದಿಗೆ) 2)

ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ ಶ್ರೀಮತಿ__________________ಎಂಬುವವರ ಮಗ/ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ____________ಎಂಬುವವರು ಕರ್ನಾಟಕ ರಾಜ್ಯದ ______ ಜಿಲ್ಲೆಯ ವಿಭಾಗ ________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.
2. ಶ್ರೀ/ ಶ್ರೀಮತಿ ________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ; 31.01.1995 ಅನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ದಿನಾಂಕ: ತಹಶೀಲ್ದಾರ್,

ಸ್ಥಳ: ______ ತಾಲ್ಲೂಕು

ಕಛೇರಿಯ ಮೊಹರು

ನಮೂನೆ–2

ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ__________________ರವರ ಮಗ/ಮಗಳು/ಪತ್ನಿ/ ಶ್ರಿ/ ಶ್ರೀಮತಿ/ಕುಮಾರಿ__________ಜಿಲ್ಲೆ________ ತಾಲ್ಲೂಕು________ಗ್ರಾಮದಲ್ಲಿ ______ ವಾಸವಾಗಿರುವ ಇವರು ಒಂದನೇ ತರಗತಿಯಿಂದ _______ ತರಗತಿಯವರೆಗೆ ______ ಜಿಲ್ಲೆ _____ ತಾಲ್ಲೂಕು_______ಪಟ್ಟಣ _______ ಶಾಲೆಯಲ್ಲಿ ವ್ಯಾಸಂಗ ಮಾಡಿ _______ ವರ್ಷ ನಡೆದ ಪರೀಕ್ಷೆಯಲ್ಲಿ ಉತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು ಸಹಿ:

ಕ್ಷೇತ್ರ ಶಿಕ್ಷಣ ಅಧಿಕಾರಿ ಮುಖ್ಯೋಪಾಧ್ಯಾಯರ ಸಹಿ

ಕಛೇರಿಯ ಮೊಹರು ಮತ್ತು ಸಂಸ್ಥೆಯ ಮೊಹರು

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೆನೆನಿ 2001 ದಿನಾಂಕ: 27.07.2001

ನಮೂನೆ–3

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

ಶ್ರೀ/ ಶ್ರೀಮತಿ ______________________________ರವರ ಮಗ/ಮಗಳು/ ಪತಿ/ ಪತ್ನಿ/ಶ್ರೀ/ಶ್ರೀಮತಿ/ಕುಮಾರಿ______________________ಜಿಲ್ಲೆ ____________ ತಾಲ್ಲೂಕು ______________ ಗ್ರಾಮದಲ್ಲಿ ______________ ವಾಸವಾಗಿರುವ ಇವರು:ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು _________ ಯೋಜನೆಗಾಗಿ _________ ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ:–

(ಅ) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ಆ) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ/ಯೋಜನೆಯಿಂದ ತಾವು ವಾಸಿಸುವ ಮನೆ/

(ಇ) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ

(ಈ) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ; ತಹಶೀಲ್ದಾರ್,
ಬೆಂಗಳೂರು: ________ ತಾಲ್ಲೂಕು
ಕಛೇರಿಯ ಮೊಹರು

(** ಅನ್ವಯವಾಗುವ ಐಟಂ ಅನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು)

ಕನ್ನಡ ಮಾಧ್ಯಮ ವಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ______________________________ರವರ ಮಗ/ಮಗಳು/ ಪತಿ/ ಪತ್ನಿ/ಶ್ರೀ/ಶ್ರೀಮತಿ/ಕುಮಾರಿ______________________ಜಿಲ್ಲೆ ____________ ತಾಲ್ಲೂಕು ______________ ಗ್ರಾಮದಲ್ಲಿ ವಾಸವಾಗಿರುವ ಇವರು __________ನೇ ತರಗತಿಯಿಂದ__________ನೇ ತರಗತಿಯವರೆಗೆ ____________ಶೈಕ್ಷಣಿಕ ವರ್ಷದವರೆಗೆ________ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ಬೆಂಗಳೂರು: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

ಕರ್ನಾಟಕ ಸರ್ಕಾರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

CERTIFICATE FOR THE PERSONS WITH DISABILITIES

This is to certify that Sri/Smt./Kum. ______________________ son/wife/daughter of Shri ________________________ Age ____________ old male/female, Registration No.__________

in a case of ______________________ He/she is physically disabled/visual disabled/speech & hearing disabled and has __________% (percent) permanent (physical impairment visual impairment speech & hearing impairment) in relation to his/her ______________

Note: 1. This condition is progressive/non-progressive/likely to improve/not likely to improve.*

2. Re-assessment is not recommended/is recommended after a period of ____________ months/years.*

*** Strike out which is not applicable.**

(Recent Attested
Photograph showing
The disability
Affixed here)

Sd/- Sd/- Sd/-
(Doctor) (Doctor) (Doctor)

Countersigned by the
Medical Superintendent CMO/Head
Of Hospital (with seal)

Signature/Thumb impression
Of the disabled person

P.R. 170

E¿ AÊ§¦ àNÊPÍ¨ñ°PñËNïôÔÊ ಕಛೇರಿ, PöóÑñÊ AÊ§¦ ÕÄñY, PöóÑñÊ.

àNQ¦¿ äÊñnô ¿ÍPv¨

àNV¦: H7.HàýHHàý.áBÊý.215./09-10, º¼ñNP 20ನೇ ಫೆಬ್ರವರಿ 2010

ಈ ಮೂಲಕ ಸಮಸ್ತ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಕೋಲಾರ ಅರಣ್ಯ ವಿಭಾಗದ ಕೆಳಕಂಡ ವಲಯಗಳಲ್ಲಿ ನೆಡುತೋಪು ಮತ್ತು ಕೆರೆ ಅಂಗಳದಲ್ಲಿ ಕತ್ರಾವಣೆ ಮಾಡಿ ತಯಾರಿಸಿದ ಅಕೇಶಿಯಾ ನಾಟಾ, ಕರಿಜಾಲಿ ಬಿಲೆಟ್ಸ್ ಲಾಟುಗಳನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಅಥವಾ ಅವರಿಂದ ನಿಯೋಜಿಸಲ್ಪಟ್ಟ ಅಧಿಕಾರಿಗಳಿಂದ ಈ ಕೆಳಕಂಡ ದಿನಾಂಕದಂದು ಅವುಗಳು ದಾಸ್ತಾನಿರುವ ಸ್ಥಳದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ಹೆಚ್ಚಿನ ವಿವರಗಳಿಗೆ ಈ ಕಛೇರಿಯ ವೇಳೆಯಲ್ಲಿ ಸಂಪರ್ಕಿಸುವುದು.

äÊñpñxÍÊôÔ ÔôÊYç ÕÔÊYçô

PÍ. àN.	¼ñwñ àNYÍäñÐNïô¹ äàÊô	äÊñp¼ º¼ñNP Ôô¬ô àÔôNïô	äÊñnô Ôïñ¤ôÔ E¬¼Yç ÕÔÊ (b¼ Õôó.YçÒ)
1	ಕೋಲಾರದ ಗಾಜಲದಿನ್ನೆ ಸಸ್ಯಕ್ಷೇತ್ರ ಟೆಂಕೆ ಡಿಪೋ	ದಿನಾಂಕ 22–3–2010 ಬೆಳಿಗ್ಗೆ 11–00 ಘಂಟೆಗೆ	46.00 ಘ.ಮೀ. ನೀಲಗಿರಿ ನಾಟಾ ಕರಿಜಾಲಿ ಬಿಲೆಟ್ಸ್
2	ಕೋಲಾರ ವಲಯ ಅರಣ್ಯಾಧಿಕಾರಿಯವರ ಕಛೇರಿ ಆವರಣ	ದಿನಾಂಕ 22–3–2010 ಮಧ್ಯಾಹ್ನ 3–30 ಘಂಟೆಗೆ	33.00 ಘ.ಮೀ. ನೀಲಗಿರಿ ನಾಟಾ
3	ಬಂಗಾರಪೇಟೆ ವಲಯ ಕಛೇರಿ ಆವರಣ, ಕಾರಬೆಲೆ ಸಸ್ಯಕ್ಷೇತ್ರ	ದಿನಾಂಕ 23–3–2010 ಬೆಳಿಗ್ಗೆ 11–00 ಘಂಟೆಗೆ	69.00 ಘ.ಮೀ. ಅಕೇಶಿಯ ನಾಟಾ
4	ತಳೂರು ಅರಣ್ಯ ಪ್ರದೇಶದ ಟೆಂಕೆ ಡಿಪೋ	ದಿನಾಂಕ 23–3–2010 ಮಧ್ಯಾಹ್ನ 3–30 ಘಂಟೆಗೆ	113.00 ಘ.ಮೀ. ನೀಲಗಿರಿ ನಾಟಾ

ಉಪ ಅರಣ್ಯ ಸಂರಕ್ಷಣಾಧಿಕಾರಿ,
ಕೋಲಾರ ವಿಭಾಗ, ಕೋಲಾರ.

ಪಿ.ಆರ್. 166

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಕಾರ್ಯನಿರ್ವಾಹಕ ಇಂಜಿನೀಯರರ ಕಛೇರಿ, ಸಣ್ಣ ನೀರಾವರಿ ವಿಭಾಗ, ಬೆಳಗಾವಿ

(ಸ್ಟಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ಕೆಡಬ್ಲ್ಯೂ–1ರ ಅನ್ವಯ)

ತಿದ್ದುಪಡಿ ಮತ್ತು ಅವಧಿ ವಿಸ್ತರಣೆ ಪ್ರಕಟಣೆ

ಸಂ.ಸನೀ.ವಿ.ಬೆಳಗಾವಿ/ಸ.ಇಂ./ಟೆಂಡರ್ ತಿದ್ದುಪಡಿ/2009–10/748, ದಿನಾಂಕ: 6ನೇ ಮಾರ್ಚ್ 2010

ಈ ಕಛೇರಿ ಟೆಂಡರ್ ಪ್ರಕಟಣೆ ಸಂ.ಸನೀ.ವಿ.ಬೆಳಗಾವಿ/ಸ.ಇಂ./ಟೆಂಡರ್/2009–10/3973 ದಿನಾಂಕ:25.11.09ರಲ್ಲಿ ಕರೆಯಲಾದ ಈ ಕೆಳಗಿನ ಕಾಮಗಾರಿಗಳ ತಿದ್ದುಪಡಿಯನ್ನು ಹಾಗೂ ಅವಧಿ ವಿಸ್ತರಣೆಯನ್ನು ಈ ಕೆಳಗಿನಂತೆ ಮಾಡಲಾಗಿದೆ.

ಕ್ರ. ಸಂ.	ಕಾಮಗಾರಿಯ ಹೆಸರು	ಟೆಂಡರಿಗಿಟ್ಟ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇಡಗಂಟು ಮೊತ್ತ (ರೂ.ಗಳಲ್ಲಿ)	ಟೆಂಡರ್ ಫಾರಂ ಬೆಲೆ ರೂ.+ತೆರಿಗೆ ಪ್ರತ್ಯೇಕ ಹಿಂದಿರುಗಿಸ ಲಾಗದು	ಕಾಮಗಾರಿ ಯನ್ನು ಪೂರ್ಣ ಗೊಳಿಸುವ ಕಾಲಮಿತಿ ಮಳೆಗಾಲ ಸೇರಿ
1.	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ಕಡೋಲಿ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ	8.25	21,000/–	1000 + tax	2 ತಿಂಗಳು

ಖಾಲಿ ಗುತ್ತಿಗೆ ಪತ್ರಗಳನ್ನು ಪಡೆಯುವ ದಿನಾಂಕ: 17.03.10

ಭರ್ತಿಮಾಡಿದ ಗುತ್ತಿಗೆಗಳನ್ನು ಸ್ವೀಕರಿಸುವ ದಿನಾಂಕ: 18.03.2010 ಸಂಜೆ 4.00 ಗಂಟೆಗೆ

ಟೆಂಡರನ್ನು ತೆರೆಯುವ ದಿನಾಂಕ: 18.03.2010 ಸಂಜೆ 4.30 ಗಂಟೆಗೆ (ಸಾಧ್ಯವಾದಲ್ಲಿ)

ಬಾಕಿ ಉಪವಿಧಿಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ವ್ಹಿ.ಬಿ. ಕುಲಕರ್ಣಿ

ಪಿ.ಆರ್. 169 ಕಾರ್ಯನಿರ್ವಾಹಕ ಇಂಜಿನೀಯರರು, ಸಣ್ಣ ನೀರಾವರಿ ವಿಭಾಗ, ಬೆಳಗಾವಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಟೆಂಡರ್ ರದ್ದುಪಡಿಸುವ ಪ್ರಕಟಣೆ

(ಸ್ಟಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ಕೆಡಬ್ಲ್ಯೂ–1 ರ ಅನ್ವಯ)

ಕಾರ್ಯನಿರ್ವಾಹಕ ಇಂಜಿನೀಯರರ ಕಛೇರಿ, ಸಣ್ಣ ನೀರಾವರಿ ವಿಭಾಗ, ಬೆಳಗಾವಿ.

ಸಂ.ಸನೀ.ವಿ.ಬೆಳಗಾವಿ/ಸ.ಇಂ./ಟೆಂಡರ್ /2009–10/665, ದಿನಾಂಕ: 2ನೇ ಮಾರ್ಚ್ 2010

ಈ ಕಛೇರಿ ಟೆಂಡರ್ ಪ್ರಕಟಣೆ ಸಂ.ಸನೀ.ವಿ.ಬೆಳಗಾವಿ/ಸ.ಇಂ./ಟೆಂಡರ್/2009–10/3972 ದಿನಾಂಕ:25.11.09 ರಲ್ಲಿ ಆಹ್ವಾನಿಸಲಾದ ಈ ಕೆಳಗಿನ ಕಾಮಗಾರಿಗಳ ಟೆಂಡರನ್ನು ಅನಿವಾರ್ಯ ಕಾರಣಗಳಿಂದ ರದ್ದುಪಡಿಸಲಾಗಿದೆ.

ಕ್ರ. ಸಂ.	ಕೆಲಸದ ಹೆಸರು	ಟೆಂಡರಿಗಿಟ್ಟ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇಡಗಂಟು ಮೊತ್ತ (ರೂ.ಗಳಲ್ಲಿ)	ಟೆಂಡರ್ ಫಾರಂ ಬೆಲೆ ರೂ.+ತೆರಿಗೆ ಪ್ರತ್ಯೇಕ ಹಿಂದಿರುಗಿ ಸಲಾಗದು	ಕೆಲಸವನ್ನು ಮುಗಿಸುವ ಕಾಲಮಿತಿ ಮಳೆಗಾಲ ಸೇರಿ
1	2	3	4	5	6
1	ಬೆಳಗಾವಿ ಜಿಲ್ಲೆ ಖಾನಾಪೂರ ತಾ. ಚಾಪಗಾಂವ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
2	ಬೆಳಗಾವಿ ಜಿಲ್ಲೆ ಸವದತ್ತಿ ತಾ. ತಲ್ಲೂರ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ. (ಶ್ರೀ ದುರ್ಗಪ್ಪಾ.ಲಕ್ಶ್ಮಣ.ನಾಯಕರ ಹಾಗೂ ಇತರರು)	5.00	12500/–	500+ tax	3 ತಿಂಗಳು
3	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಮಾಡಮಗೇರಿ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ. (ಶ್ರೀ.ಡಿ.ಐ.ಯರಗನವಿ ಹಾಗೂ ಇತರರು)	5.00	12500/–	500+ tax	3 ತಿಂಗಳು
4	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಶಿವಾಪೂರ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ. (ಶ್ರೀ.ಆರ್.ಕೆ.ಬೆಟಸೂರ ಹಾಗೂ ಇತರರು)	5.00	12500/–	500+ tax	3 ತಿಂಗಳು
5	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಯರಜರವಿ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ (ಶ್ರೀ.ದೇವಪ್ಪಾ.ಪೂಜೇರ ಹಾಗೂ ಇತರರು)	5.00	12500/–	500+ tax	3 ತಿಂಗಳು
6	ಬೆಳಗಾವಿ ಜಿಲ್ಲೆ ರಾಮದುರ್ಗ ತಾ. ಹಂಪಿಹೊಳಿ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
7	ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾ. ಏಕ್ಸಂಭಾ ಗ್ರಾಮದ ಹತ್ತಿರ (ಶ್ರೀ.ಪದಮಣ್ಣ ಮಾಳಗಿ & ಇತರರು) ಗಂಗಾ ಕಲ್ಯಾಣ ನೀರಾವರಿ ಯೋಜನೆ.	4.00	10000/–	400+ tax	3 ತಿಂಗಳು

ವ್ಹಿ.ಬಿ. ಕುಲಕರ್ಣಿ

ಕಾರ್ಯನಿರ್ವಾಹಕ ಇಂಜಿನೀಯರರು,

ಸಣ್ಣ ನೀರಾವರಿ ವಿಭಾಗ ಬೆಳಗಾವಿ

ಪಿ.ಆರ್. 164

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಟೆಂಡರ್ ರದ್ದುಪಡಿಸುವ ಪ್ರಕಟಣೆ

(ಸ್ಟಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ಕೆಡಬ್ಲ್ಯೂ–1 ರ ಅನ್ವಯ)

ಕಾರ್ಯನಿರ್ವಾಹಕ ಇಂಜಿನೀಯರರ ಕಛೇರಿ, ಸಣ್ಣ ನೀರಾವರಿ ವಿಭಾಗ, ಬೆಳಗಾವಿ.

ಸಂ.ಸನೀ.ವಿ.ಬೆಳಗಾವಿ/ಸ.ಇಂ./ಟೆಂಡರ್ /2009–10/666, ದಿನಾಂಕ: 2ನೇ ಮಾರ್ಚ್ 2010

ಈ ಕಛೇರಿ ಟೆಂಡರ್ ಪ್ರಕಟಣೆ ಸಂ.ಸನೀ.ವಿ.ಬೆಳಗಾವಿ/ಸ.ಇಂ./ಟೆಂಡರ್/2009–10/3973 ದಿನಾಂಕ:25.11.09ರಲ್ಲಿ ಆಹ್ವಾನಿಸಲಾದ ಈ ಕೆಳಗಿನ ಕಾಮಗಾರಿಗಳ ಟೆಂಡರನ್ನು ಅನಿವಾರ್ಯ ಕಾರಣಗಳಿಂದ ರದ್ದುಪಡಿಸಲಾಗಿದೆ.

ಕ್ರ. ಸಂ.	ಕೆಲಸದ ಹೆಸರು	ಟೆಂಡರಿಗಿಟ್ಟ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇಡಗಂಟು ಮೊತ್ತ (ರೂ.ಗಳಲ್ಲಿ)	ಟೆಂಡರ್ ಫಾರಂ ಬೆಲೆ ರೂ.+ತೆರಿಗೆ ಪ್ರತ್ಯೇಕ ಹಿಂದಿರುಗಿ ಸಲಾಗದು	ಕೆಲಸವನ್ನು ಮುಗಿಸುವ ಕಾಲಮಿತಿ ಮಳೆಗಾಲ ಸೇರಿ
1	2	3	4	5	6
1	ಮೇಲ್ಮಟ್ಟಿ ಹತ್ತಿರ ಶ್ರೀ ಚಂದ್ರಪ್ಪಾ. ಭೀ. ಹೊಲೇರ. ಹಾಗೂ ಇತರರಿಗೆ ಗಂಗಾ ಕಲ್ಯಾಣ ಯೋಜನೆ	5.00	12500/–	500+ tax	3 ತಿಂಗಳು
2	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ನಾವಗೆ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
3	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ಗೋಜಗೆ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
4	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ಮಣ್ಣೂರ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
5	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ಬಡಸ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
6	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ವಿರಪನಕೊಪ್ಪ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
7	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ಉಚಗಾಂವ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು
8	ಬೆಳಗಾವಿ ಜಿಲ್ಲೆ ಬೆಳಗಾವಿ ತಾ. ಹಿರೇಬಾಗೆವಾಡಿ ಗ್ರಾಮದ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.	5.00	12500/–	500+ tax	3 ತಿಂಗಳು

ಕ್ರ. ಸಂ.	ಕೆಲಸದ ಹೆಸರು	ಟೆಂಡರಿಗಿಟ್ಟ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇಡಗಂಟು ಮೊತ್ತ (ರೂ.ಗಳಲ್ಲಿ)	ಟೆಂಡರ್ ಫಾರಂ ಬೆಲೆ ರೂ.+ತೆರಿಗೆ ಪ್ರತ್ಯೇಕ ಹಿಂದಿರುಗಿ ಸಲಾಗದು	ಕೆಲಸವನ್ನು ಮುಗಿಸುವ ಕಾಲಮಿತಿ ಮಳೆಗಾಲ ಸೇರಿ
9	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಯರಗಟ್ಟಿ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.. (ಶ್ರೀ ಕೆ.ಡಿ.ಹರಿಜನ ಹಾಗೂ ಇತರರು)	5.00	12500/–	500+ tax	3 ತಿಂಗಳು
10	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಯರಗಟ್ಟಿ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ.. (ಶ್ರೀ ಎಹ್.ಎಫ.ಕಾಮೋಶಿ ಹಾಗೂ ಇತರರು)	5.00	12500/–	500+ tax	3 ತಿಂಗಳು
11	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಯರಗಟ್ಟಿ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ..(ಶ್ರೀ.ವೈ.ವೈ.ನೀಲಪ್ಪನವರ)	5.00	12500/–	500+ tax	3 ತಿಂಗಳು
12	ಬೆಳಗಾವಿ ಜಿಲ್ಲೆ ಸವದತ್ತಿ ತಾ. ರೈನಾಪೂರ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ..(ಶ್ರೀಮತಿ.ಜಿ.ಎಚ್.ಮುದೆನ್ನವರ ಹಾಗೂ ಇತರರು)	5.00	12500/–	500+ tax	3 ತಿಂಗಳು
13	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಸೋಮಾಪೂರ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ..(ಶ್ರೀ.ಟಿಕಪ್ಪಾ.ಲಮಾಣಿ ಹಾಗೂ ಇತರರು)	5.00	12500/–	500+ tax	3 ತಿಂಗಳು
14	ಬೆಳಗಾವಿ ಜಿಲ್ಲೆ ಸವದತ್ತಿ ತಾ. ಶಿಂಧೋಗಿ ಹತ್ತಿರ ಗಂಗಾ ಕಲ್ಯಾಣ ನೀರಾವರಿ ಯೋಜನೆ..(ಶ್ರೀ.ಕೆ.ಜಿ.ಮಾದರ ಹಾಗೂ ಇತರರು)	5.00	12500/–	500+ tax	3 ತಿಂಗಳು

ವ್ಹಿ.ಬಿ. ಕುಲಕರ್ಣಿ
ಕಾರ್ಯನಿರ್ವಾಹಕ ಇಂಜಿನೀಯರರು,
ಸಣ್ಣ ನೀರಾವರಿ ವಿಭಾಗ ಬೆಳಗಾವಿ

ಪಿ.ಆರ್. 165

ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ

ಕಾರ್ಯನಿರ್ವಾಹಕ ಅಭಿಯಂತರರ ಕಾರ್ಯಾಲಯ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ

ವಿಜಾಪೂರ ವಿಭಾಗ, ವಿಜಾಪೂರ

ವಿಷಯ: ಇಲಾಖೆಯ ಸಂಪೂರ್ಣ ನಿರುಪಯುಕ್ತ (ಸ್ಕ್ರಾಪ್) ವಾಗಿರುವ ಟ್ರಾಕ್ಟರ್ ಎಮ್.ವೈ.ಜೆ.–5015 ಹಾಗೂ ಟ್ರೇಲರ್ ಎಮ್.ವೈ.ಜೆ.–5016 ಗಳನ್ನು ಮೊಹರಾದ ಟೆಂಡರ್ ಕರೆಯುವುದರ ಜೊತೆಗೆ ಸಾರ್ವಜನಿಕ ಬಹಿರಂಗ ಹರಾಜು ಮಾಡುವ ಕುರಿತು.

ಉಲ್ಲೇಖ: 1. ಮುಖ್ಯ ಇಂಜಿನೀಯರರು ಸಂಪರ್ಕ ಮತ್ತು ಕಟ್ಟಡ (ಉತ್ತರ) ವಲಯ, ಧಾರವಾಡ ರವರ ಕಛೇರಿ ಪತ್ರ ಸಂ.ಸಿ.ಬಿ.ಎನ್/ಸಿ–7/ಉಗ್ರಾಣ/ಸ.ವ/09–10713636 ದಿನಾಂಕ: 23.1.2010

2. ಅಧೀಕ್ಷಕ ಅಭಿಯಂತರರು ಲೋ.ಇ. ಬೆಳಗಾಂವ ವೃತ್ತ ಬೆಳಗಾಂವರವರ ಕಛೇರಿ ಪತ್ರ ಸಂಖ್ಯೆ: ಲೋ.ಇ./ಬೆ.ವೃ/ಸಿ–5/ಉಗ್ರಾಣ/2009–10/5867/ದಿ:29.1.2010.

ಈ ವಿಭಾಗದ ಸಂಪೂರ್ಣ ನಿರುಪಯುಕ್ತವಾಗಿರುವ (ಸ್ಕ್ರಾಪ್) ಟ್ರಾಕ್ಟರ್ ಎಮ್.ವೈ.ಜೆ.–5015 ಹಾಗೂ ಟ್ರೇಲರ್ ಎಮ್.ವೈ.ಜೆ.–5016 ಗಳನ್ನು – ಸಾರ್ವಜನಿಕ ಹರಾಜು ಮಾಡುವ ಸಲುವಾಗಿ ಮೊಹರಾದ ಟೆಂಡರ್ ಕರೆಯುವುದರ ಜೊತೆಗೆ ಸಾರ್ವಜನಿಕ ಬಹಿರಂಗ ಹರಾಜನ್ನು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಉಪ ವಿಭಾಗ ಇಂಡಿ ರವರ ಕಛೇರಿ ಆವರಣದಲ್ಲಿ ಟ್ರಾಕ್ಟರ್ ಎಮ್.ವೈ.ಜೆ. –5015 ಹಾಗೂ ಟ್ರೇಲರ್ ಎಮ್.ವೈ.ಜೆ.–5016 ಗಳನ್ನು ಹೇಗಿದೆಯೋ ಹಾಗೇ ದಿನಾಂಕ:22.3.2010 ರಂದು ಸಂಜೆ 4.00 ಗಂಟೆಗೆ ಸಾರ್ವಜನಿಕ ಬಹಿರಂಗ ಹರಾಜು ಮಾಡಲಾಗುವುದು. ದಿನಾಂಕ:19.3.2010 ರಂದು ಟ್ರಾಕ್ಟರ್ ಎಮ್.ವೈ.ಜೆ. – 5015 ಹಾಗೂ ಟ್ರೇಲರ್ ಎಮ್.ವೈ.ಜೆ.–5016 ಗಳನ್ನು ಇದ್ದ ಸ್ಥಳದಲ್ಲಿ ಸಾರ್ವಜನಿಕ ಸಮೀಕ್ಷೆಗೆ ಇಡಲಾಗುವುದು.

ಟೆಂಡರ್ ಫಾರಂಗಳನ್ನು ದಿನಾಂಕ:20.03.2010 ರಂದು ಮಧ್ಯಾಹ್ನ 1.30 ಗಂಟೆಯವರೆಗೆ ವಿಭಾಗ ಕಚೇರಿಯ ಕೆಲಸದ ಸಮಯದಲ್ಲಿ ಸೆಟ್ ಒಂದಕ್ಕೆ 500–00 ರೂ ಪಾವತಿ ಮಾಡಿ ಸಮಕ್ಷಮ ಪಡೆಯತಕ್ಕದ್ದು (ಮರಳಿ ಕೊಡಲಾಗುವುದಿಲ್ಲ) ಅಂಚೆಯ ಮೂಲಕ ವ್ಯವಹರಿಸುವುದಿಲ್ಲ. ಸಾರ್ವಜನಿಕ ಹರಾಜಿನಲ್ಲಿ ಭಾಗವಹಿಸುವವರು ವಾಹನದ ಮುಂದೆ ಕಾಣಿಸಿದಷ್ಟು ಮುಂಗಡ ಹಣವನ್ನು ಹರಾಜಿನ ಸಮಯಕ್ಕಿಂತ ಅರ್ಧತಾಸು ಮೊದಲು ನಗದು ರೂಪದಲ್ಲಿ ಒಪ್ಪಿಸಬೇಕು. ಟೆಂಡರ್‌ಗಳನ್ನು ಒಪ್ಪಿಸುವವರು ಗರಿಷ್ಠ ಬೇಡಿಕೆಯ (1/2) ಅರ್ಧ ಭಾಗದ ಹಣದ ಡಿ.ಡಿ.ಯನ್ನು ಕೆಳಗೆ ಸಹಿ ಮಾಡಿದವರ ಹೆಸರಿನಲ್ಲಿ ಲಗತ್ತಿಸಬೇಕು. ಮೊಹರಾಗಿ ಬಂದ ಟೆಂಡರುಗಳನ್ನು ಹರಾಜು ಮುಗಿದ ಮೇಲೆ ಒಡೆದು ಸಾರ್ವಜನಿಕ ಹರಾಜಿನ ಗರಿಷ್ಠ ಮೊತ್ತದ ಬೇಡಿಕೆಯ ಜೊತೆಗೆ ತುಲನೆ ಮಾಡಿದ ಮೇಲೆ ಈ ದರಗಳಲ್ಲಿ ಗರಿಷ್ಠ ಮೊತ್ತದ ಬೇಡಿಕೆಯನ್ನು ಯಶಸ್ವಿ ಹರಾಜಿನ ಮೊತ್ತವೆಂದು ಪರಿಗಣಿಸಲಾಗುವುದು. ಯಶಸ್ವಿ ಹರಾಜುದಾರರು ಒಟ್ಟು ಮೊತ್ತದ ಶೇಕಡಾ 50% ರಷ್ಟು ಹಣವನ್ನು ತೆರಿಗೆ % 12.50 ಸೇರಿಸಿ ಹರಾಜಿನ ಸ್ಥಳದಲ್ಲಿ ತಕ್ಷಣ ಪಾವತಿ ಮಾಡತಕ್ಕದ್ದು.

ಅ. ನಂ.	ವಾಹನದ ಹೆಸರು	ನಗ	ಮುಂಗಡ ಹಣ	ಹರಾಜಿನ ಸ್ಥಳ	ಹರಾಜಿನ ದಿನಾಂಕ ಹಾಗೂ ಸಮಯ
1.	ಟ್ರಾಕ್ಟರ್ ಎಮ್.ವೈ.ಜೆ.–5015 ಹಾಗೂ ಟ್ರೇಲರ್ ಎಮ್.ವೈ.ಜೆ.–5016 ಗಳನ್ನು	1 ನಗ	5000.00	ಲೋ.ಇ.ಉಪವಿಭಾಗ, ಲೋ.ಬಂ .&. ಒ.ಜ.ಆ.ಇ. ಉಪ ವಿಭಾಗ ಇಂಡಿಯಲ್ಲಿ	22.3.2010 ಸಂ.4.00 ಗಂಟೆಗೆ

ಹರಾಜಿನ ಷರತ್ತುಗಳು ಹಾಗೂ ನಿಯಮಗಳನ್ನು ಈ ಕಚೇರಿಯಿಂದ ಪಡೆಯಬಹುದು.

ರಾಜಶೇಖರ.ಯಡಹಳ್ಳಿ

ಪಿ.ಆರ್. 155

ಕಾರ್ಯನಿರ್ವಾಹಕ ಅಭಿಯಂತರರು,
ಲೋ.ಬಂ.ಮ.ಒ.ಜ.ಸಾ.ಇ.ವಿ.ವಿಜಾಪೂರ

ಲೋಕೋಪಯೋಗಿ ಇಲಾಖೆ

ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಚಿಕ್ಕಬಳ್ಳಾಪುರ ವಿಭಾಗ, ಚಿಕ್ಕಬಳ್ಳಾಪುರ

ಅಲ್ಪಾವಧಿ ಟೆಂಡರ್‌ಗಳಿಗಾಗಿ ಆಹ್ವಾನ (ಐ.ಎಫ್.ಟಿ) ಸಂಖ್ಯೆ: 24/2009–10, ದಿನಾಂಕ: 2ನೇ ಮಾರ್ಚ್ 2010 (3ನೇ ಕರೆ)

ಸೆಕ್ಷನ್ – 1 ಟೆಂಡರುಗಳಿಗಾಗಿ ಅರ್ಜಿ ಆಹ್ವಾನ (IFT)

(ರಸ್ತೆ, ಸೇತುವೆ ಹಾಗೂ ಕಟ್ಟಡಗಳ ಕಾಮಗಾರಿಗಳಿಗಾಗಿ – ಸ್ಟಾಂಡರ್ಡ್ ಬಿಡ್ಡಿಂಗ್ ಡಾಕ್ಯುಮೆಂಟ್ ಕೆ/ಡಬ್ಲ್ಯೂ–3 ರಂತೆ ದ್ವಿ–ಲಕೋಟೆ ಪದ್ಧತಿಯಲ್ಲಿ ಟೆಂಡರ್ ಆಹ್ವಾನ)

1. ಈ ಕೆಳಗೆ ತಿಳಿಸಿದ ಕಾಮಗಾರಿಗಳಿಗಾಗಿ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಿಕ್ಕಬಳ್ಳಾಪುರ ವಿಭಾಗ, ಚಿಕ್ಕಬಳ್ಳಾಪುರ – 562 101 ರವರು ಮ್ಯಾನ್ಯೂಯಲ್ ಮೂಲಕ ರಾಜ್ಯಪಾಲರು, ಕರ್ನಾಟಕ ಸರ್ಕಾರ ರವರ ಪರವಾಗಿ ಐಟಮ್–ರೇಟ್ ಟೆಂಡರ್‌ಗಳನ್ನು, ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಅಧಿಸೂಚನೆಯಲ್ಲಿ ಸೂಚಿಸಿರುವ ದಿನಾಂಕದೊಳಗೆ (ದ್ವಿಲಕೋಟೆಗಳಲ್ಲಿ) ತಾಂತ್ರಿಕ ಬಿಡ್ ಮತ್ತು ಆರ್ಥಿಕ ಬಿಡ್‌ಗಳನ್ನು ಟೆಂಡರ್ ದಾಸ್ತಾವೇಜಿನಲ್ಲಿರುವಂತೆ ಸಲ್ಲಿಸಬಹುದಾಗಿರುತ್ತದೆ. ಕಾಮಗಾರಿಗೆ ಬೇಕಾಗುವ ಕನಿಷ್ಠತಮ ಪೂರ್ವಾರ್ಹತೆಯ ಬಗ್ಗೆ ಟೆಂಡರ್ ದಾಸ್ತಾವೇಜಿನ ಭಾಗ–3ರಡಿ ಗುತ್ತಿಗೆದಾರರಿಗೆ ನೀಡಿರುವ ಸೂಚನೆಗಳನ್ನು ನೋಡಲು ಕೋರಲಾಗಿದೆ,

2. ಟೆಂಡರ್ ಡಾಕ್ಯೂಮೆಂಟ್‌ಗಳನ್ನು ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಅಂದರೆ https://eproc.karnataka.gov.in ಮೂಲಕ ದಿನಾಂಕ: 15.03.2010 ರಿಂದ 20.03.2010 ರವರಿಗೆ ಪಡೆಯ ಬಹುದಾಗಿರುತ್ತದೆ.
3. ಟೆಂಡರ್‌ನೊಂದಿಗೆ ಈ ಕೆಳಗಿನ ಕೋಷ್ಟಕದಲ್ಲಿ ನಮೂದಿಸಿರುವ ಇ.ಎಂ.ಡಿ. ಹಣವನ್ನು ಟೆಂಡರ್ ಅರ್ಹತಾ ಅವಧಿಯನ್ನು ಬಿಟ್ಟು ಹೆಚ್ಚಿನ 45 ದಿನಗಳ ಅವಧಿಯನ್ನು ಒಳಗೊಂಡಿರುವಂತೆ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ತಿಳಿಸಿರುವ ರೂಪದಲ್ಲಿ ಪಾವತಿಸುವುದು.
4. ಟೆಂಡರ್‌ಗಳನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಆನ್‌ಲೈನ್ ಮೂಲಕ ದಿನಾಂಕ: 20.03.10 ರಂದು ಸಂಜೆ 4.00 ಗಂಟೆ ಒಳಗಾಗಿ ಸಲ್ಲಿಸತಕ್ಕದ್ದು. ಮತ್ತು ಸದರಿ ಟೆಂಡರ್‌ಗಳನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಗೈಡ್‌ಲೈನ್‌ನಂತೆ / ಟೆಂಡರ್ ಅಧಿಸೂಚನೆಯಲ್ಲಿ ಸೂಚಿಸಿರುವಂತೆ ನಿಗದಿತ ಸಮಯದಲ್ಲಿ ತೆರೆಯಲಾಗುವುದು.
5. ಟೆಂಡರ್ ಪೂರ್ವ ಸಭೆಯನ್ನು ದಿನಾಂಕ: 17.03.2010 ರಂದು ಮಧ್ಯಾಹ್ನ 3.00 ಗಂಟೆಗೆ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಿಕ್ಕಬಳ್ಳಾಪುರ ವಿಭಾಗ, ಚಿಕ್ಕಬಳ್ಳಾಪುರ ರವರ ಕಛೇರಿಯಲ್ಲಿ ನಡೆಸಲಾಗುವುದು.
6. ಹೆಚ್ಚಿನ ಮಾಹಿತಿಗಾಗಿ www.kpwd.gov.in ವೆಬ್‌ಸೈಟ್‌ನ್ನು ಸಂಪರ್ಕಿಸಬಹುದು ಅಥವಾ ಕಛೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದು.

ಕೋಷ್ಟಕ

ಕ್ರ. ಸಂ.	ಕೆಲಸದ ಹೆಸರು	ಟೆಂಡರ್‌ಗಿಟ್ಟ ಮೊತ್ತ ರೂ.ಲಕ್ಷಗಳಲ್ಲಿ	ಇ.ಎಂ.ಡಿ. (ರೂ. ಲಕ್ಷಗಳಲ್ಲಿ)	ಟೆಂಡರ್ ಪ್ರೊಸೆಸಿಂಗ್ ಶುಲ್ಕ (ರೂ.ಗಳಲ್ಲಿ)	ಕಾಮಗಾರಿಯನ್ನು ಪೂರ್ಣಗೊಳಿಸಲು ಗೊತ್ತುಪಡಿಸಲಾದ ಕಾಲಾವಧಿ ಮಳೆಗಾಲ ಸೇರಿ ಒಟ್ಟು
1.	ಬಾಗೇಪಲ್ಲಿ ತಾಲ್ಲೂಕು ಬಿ.ಬಿ. ರಸ್ತೆಯಿಂದ ವೈ.ಸಿ.ರಸ್ತೆಗೆ ಉಗಲನಾಗೇಪಲ್ಲಿ ಮಾರ್ಗವಾಗಿ ಸೇರುವ ರಸ್ತೆಯನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಯ ಅಂದಾಜು	79.00	1.60	ಇ–ಪೋರ್ಟಲ್ ಆಧಾರಿತ	6 ತಿಂಗಳು
2.	ಚಿಂತಾಮಣಿ ತಾ. ಅಟ್ಟೂರು ಹೊಸಹಳ್ಳಿ ರಸ್ತೆಯಿಂದ ಬಿ.ಸಿ.ರಸ್ತೆಗೆ ವಿರೂಪಾಕ್ಷಪುರ ಮಾರ್ಗವಾಗಿ ಸೇರುವ ರಸ್ತೆಯನ್ನು ಅಭಿವೃದ್ಧಿಪಡಿಸುವುದು (2ನೇ ಹಂತ)	90.00	1.80		6 ತಿಂಗಳು
3.	ಚಿಕ್ಕಬಳ್ಳಾಪುರ ತಾ. ರಾಷ್ಟ್ರೀಯ ಹೆದ್ದಾರಿ–7 ರಿಂದ ಸೂಸೇಪಾಳ್ಯಕ್ಕೆ ಹಾರೊಬಂಡೆ ಮಾರ್ಗವಾಗಿ ಸೇರುವ ರಸ್ತೆಯನ್ನು ಅಭಿವೃದ್ಧಿಪಡಿಸುವುದು	72.30	1.45		6 ತಿಂಗಳು
4.	ಗೌರಿಬಿದನೂರು ತಾ. ಸಬ್ಬನಹಳ್ಳಿಯಿಂದ ಕೋಡಿಹಳ್ಳಿ ರಸ್ತೆಗೆ ಜೆ.ಕೊತ್ತೂರು ಮಾರ್ಗವಾಗಿ ಸೇರುವ ರಸ್ತೆಯನ್ನು ಅಭಿವೃದ್ಧಿಪಡಿಸುವುದು	94.00	1.90		6 ತಿಂಗಳು
5.	ಶಿಡ್ಲಘಟ್ಟ ತಾ. ಕೆ.ವೈ ರಸ್ತೆಯಿಂದ ಬಿ.ಬಿ. ರಸ್ತೆಗೆ ಕುಂದಲಗುರ್ಕಿ ಮಾರ್ಗವಾಗಿ ಸೇರುವ ರಸ್ತೆಯನ್ನು ಅಭಿವೃದ್ಧಿಪಡಿಸುವುದು (2ನೇ ಹಂತ)	90.00	1.80		6 ತಿಂಗಳು

ಸೂಚನೆ: ಮೇಲಿನ ಕಾಮಗಾರಿ ಬಗ್ಗೆ ಕೆ.ಡಬ್ಲ್ಯೂ–3 ರ ದಸ್ತಾವೇಜಿನ ಸೂಚನೆಗಳನ್ನು ಪಾಲಿಸುವುದು.

1. ಆಕ್ಷೇಪಣೆ–ಸಂದೇಹ ಮತ್ತು ವಿವರಣೆಗಳಿಗೆ ಕಡೆಯ ದಿನಾಂಕ: 17.03.2010 (ಸಂಜೆ 3.00 ಗಂಟೆಗೆ ಕಛೇರಿ ವೇಳೆಯಲ್ಲಿ)
2. ಭರ್ತಿಮಾಡಿದ ಟೆಂಡರ್‌ಗಳನ್ನು ಸಲ್ಲಿಸಲು ಕಡೆಯ ದಿನಾಂಕ: 20.03.2010 (ಸಂಜೆ 4.00 ಗಂಟೆಯವರೆಗೆ)
3. ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: 24.03.2010 ಬೆಳಿಗ್ಗೆ 11.00 ಗಂಟೆಗೆ
4. ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ: 29.03.2010 ಬೆಳಿಗ್ಗೆ 11.00 ಗಂಟೆಗೆ

ಕಾರ್ಯನಿರ್ವಾಹಕ ಇಂಜಿನಿಯರ್,

ಪಿ.ಆರ್. 156 ಚಿಕ್ಕಬಳ್ಳಾಪುರ ಲೋ.ಇ. ವಿಭಾಗ, ಚಿಕ್ಕಬಳ್ಳಾಪುರ.